# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 719(679) |
| ಸದಸ್ಯರ ಹೆಸರು | ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 19.09.2022 |
| ಉತ್ತರಿಸಬೇಕಾದ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿಗೆ ಸರ್ಕಾರವು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ಪಠ್ಯ ಪುಸ್ತಕಗಳನ್ನು ಪರಿಷ್ಕರಣೆ ಮಾಡಿದ್ದು, ಸದರಿ ಪರಿಷ್ಕರಣಾ ಸಮಿತಿಯನ್ನು ಯಾವ ಮಾನದಂಡದ ಆಧಾರದ ಮೇಲೆ ರಚನೆ ಮಾಡಲಾಗಿರುತ್ತದೆ; | ಇಡಿ 52 ಪಿಎಂಸಿ 2021, ದಿನಾಂಕ: 08-09-2021ರ ಆದೇಶದನ್ವಯ, ಶ್ರೀ ರೋಹಿತ್ ಚಕ್ರತೀರ್ಥರವರ ಅಧ್ಯಕ್ಷತೆಯಲ್ಲಿ 1 ರಿಂದ 10ನೇ ತರಗತಿಗಳ ಕನ್ನಡ ಭಾಷಾ ಪಠ್ಯಪುಸ್ತಕಗಳು, ಪರಿಸರ ಅಧ್ಯಯನ ಹಾಗೂ 6 ರಿಂದ 10ನೇ ತರಗತಿಗಳ ಸಮಾಜ ವಿಜ್ಞಾನ ಪಠ್ಯಪುಸ್ತಕಗಳ ಸೂಕ್ಷ್ಮ ವಿಚಾರಗಳನ್ನು ಪರಿಶೀಲನೆ ಮಾಡಲು ಆದೇಶಿಸಲಾಗಿರುತ್ತದೆ. (ಪ್ರತಿ ಲಗತ್ತಿಸಿದೆ) |
| ಆ) | ಸದರಿ ಪಠ್ಯಪುಸ್ತಕ ಪರಿಷ್ಕರಣೆ ಸಮಿತಿಯ ಅಧ್ಯಕ್ಷರನ್ನು ಯಾವ ನಿಯಮಾವಳಿಗಳು ಹಾಗೂ ನಿಬಂಧನೆಗಳನ್ವಯ ಆಯ್ಕೆ ಮಾಡಲಾಗಿದೆ; | |
| ಇ) | ಸದರಿ ಪಠ್ಯ ಪರಿಷ್ಕರಣೆ ಸಮಿತಿಯ ಅಧ್ಯಕ್ಷರು ಪಠ್ಯ ಪರಿಷ್ಕರಣೆ ಮಾಡುವ ಸಮಯದಲ್ಲಿ ಅನೇಕ ಮಹನೀಯರಿಗೆ (ಉದಾಹರಣೆಗೆ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್, ಮಹಾನ್ ಮಾನವತಾವಾದಿ ಶ್ರೀಮಾನ್ ಬಸವಣ್ಣನವರು, ರಾಷ್ಟ್ರಕವಿ ಕುವೆಂಪುರವರು, ಶ್ರೀ ಭಗತ್ ಸಿಂಗ್ ರವರು ಶ್ರೀ ನಾರಾಯಣ ಗುರುಗಳು, ಆದಿ ಕವಿ ವಾಲ್ಮೀಕಿ ಗುರುಗಳು ಹಾಗೂ ಇನ್ನಿತರೆ ಮಹಾನ್ ವ್ಯಕ್ತಿಗಳಿಗೆ) ಅವಮಾನ ಮಾಡಿ ಪಠ್ಯ ಪುಸ್ತಕಗಳನ್ನು ಮುದ್ರಿಸಿ ವಿತರಿಸಿದ್ದರೂ ಸಹ ಸದರಿ ಲೋಪದೋಷಗಳು ಸರ್ಕಾರದ ಗಮನಕ್ಕೆ ಬಂದಿಲ್ಲವೇ; | ಪಠ್ಯಪರಿಷ್ಕರಣೆ ಸಮಯದಲ್ಲಿ ಯಾವುದೇ ಮಹನೀಯರಿಗೆ ಅವಮಾನ ಆಗಿರುವುದಿಲ್ಲ. ಪಠ್ಯ ಪರಿಷ್ಕರಣೆಯ ಸಮಯದಲ್ಲಿ ಬಿಟ್ಟುಹೋದ ಕೆಲವು ಅಂಶಗಳನ್ನು ಸೇರ್ಪಡೆ ಮಾಡಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗಿದೆ. |

| | | |
|---|---|---|
| ಈ) | ಬಂದಿದ್ದಲ್ಲಿ, ಸದರಿ ಲೋಪದೋಷಗಳನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಹಾಗೂ ಮಹನೀಯರಿಗೆ ಅವಮಾನ ಮಾಡಿ, ಈ ರೀತಿ ತಪ್ಪು ಪಠ್ಯಗಳನ್ನು ಮುದ್ರಿಸಿರುವ ಪಠ್ಯ ಪುಸ್ತಕ ಪರಿಷ್ಕರಣೆ ಸಮಿತಿಯ ಅಧ್ಯಕ್ಷರ ಮೇಲೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ಒದಗಿಸುವುದು) | ಪ್ರತಿ ಬಾರಿ ಪಠ್ಯ ಪುಸ್ತಕ ರಚನೆ / ಪುನರ್ ರಚನೆ ಆದ ಸಂದರ್ಭದಲ್ಲಿ ಕಂಡು ಬರುವ ದೋಷಗಳನ್ನು ಸರಿಪಡಿಸಿ, ತಿದ್ದೋಲೆಯನ್ನು ಹೊರಡಿಸಲಾಗುತ್ತದೆ. ಅದರಂತೆ ಈ ಬಾರಿಯ ಪರಿಷ್ಕೃತ ಪಠ್ಯಪುಸ್ತಕಗಳಲ್ಲಿನ ಸೇರ್ಪಡೆ / ತಿದ್ದುಪಡಿಗಳಿಗೆ ಸಂಬಂಧಿಸಿದ ಅಂಶಗಳಿಗೆ ಇಡಿ 52 ಪಿಎಂಸಿ 2021 ಇಡಿ 52 ಪಿಎಂಸಿ 2021 (ಭಾಗ-1), ದಿನಾಂಕ:23-06-2022ರನ್ವಯ ತಿದ್ದೋಲೆಯನ್ನು ಹೊರಡಿಸಲಾಗಿರುತ್ತದೆ. (ಪ್ರತಿ ಲಗತ್ತಿಸಿದೆ)<br><br>ಇಡಿ 52 ಪಿಎಂಸಿ 2021 (ಭಾಗ-1), ದಿನಾಂಕ: 07-06-2022 ರ ಆದೇಶದನ್ವಯ ಸಮಿತಿಯನ್ನು ವಿಸರ್ಜಿಸಲಾಗಿದೆ. (ಪ್ರತಿ ಲಗತ್ತಿಸಿದೆ) |

ಇಪಿ 311 ಪಿಎಂಸಿ 2022

( ಬಿ.ಸಿ.ನಾಗೇಶ್ )
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 6ನೇ ತರಗತಿಯ ಸಮಾಜ ವಿಜ್ಞಾನ ವಿಷಯದ ಭಾಗ–1ರ ಪಠ್ಯ ಪುಸ್ತಕದ ಪಾಠಾಂಶವನ್ನು ಕೈ ಬಿಡುವ ಕುರಿತಂತೆ ಪರಿಶೀಲನಾ ಸಮಿತಿ ರಚನೆ ಬಗ್ಗೆ.

ಓದಲಾಗಿದೆ :
1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಟಿಪ್ಪಣಿ ಸಂಖ್ಯೆ : ಪ್ರಾ.ಪ್ರೌ.ಸ.ಸ–9992/ಬಿ/2020–21, ದಿನಾಂಕ : 17.12.2020.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ (ರಿ), ಬೆಂಗಳೂರು ರವರ ಸುತ್ತೋಲೆ ಸಂಖ್ಯೆ: ಎ1–ಕರ್ನಾಟಕ ಪಟ್ಯ ಪುಸ್ತಕ ಸಂಘ (ರಿ) / 6ನೇ ತರಗತಿ ಸಮಾಜ ವಿಜ್ಞಾನ / ಸಂ / ಇತರೆ / 09/2021, ದಿನಾಂಕ:17–02–2021.
3. ಏಕ ಕಡತ ಸಂಖ್ಯೆ ಎ1–ಕರ್ನಾಟಕ ಪಠ್ಯ ಪುಸ್ತಕ ಸಂಘ (ರಿ) / 6ನೇ ತರಗತಿ ಸಮಾಜ ವಿಜ್ಞಾನ / ಸಂ / ಇತರೆ / 09/2021.

ಪ್ರಸ್ತಾವನೆ :–

ಮೇಲೆ ಓದಲಾದ ಕ್ರಮಾಂಕ (1)ರ ಮಾನ್ಯ ಸಚಿವರ ದಿನಾಂಕ:17–12–2021 ರ ಟಿಪ್ಪಣಿಯಲ್ಲಿ 6ನೇ ತರಗತಿಯ ಸಮಾಜ ವಿಜ್ಞಾನ ಭಾಗ–1ರ ಪುಟ ಸಂಖ್ಯೆ 82 ಮತ್ತು 83 ರಲ್ಲಿರುವ ಹೊಸಧರ್ಮಗಳು ಏಕೆ ಉದಯಿಸಿದವು ಎಂಬ ಪೀಠಿಕಾ ಸ್ವರೂಪದ ಅನಗತ್ಯ ಹಾಗೂ ಆ ತರಗತಿಯ ಮಕ್ಕಳ ವಯೋಮಾನಕ್ಕೆ ಮೀರಿದ ಪಠ್ಯ ಬೋಧನೆಯನ್ನು ಈ ಶೈಕ್ಷಣಿಕ ಸಾಲಿನಿಂದ ಕೈಬಿಡಲು ಕೂಡಲೇ ಅಗತ್ಯ ಸುತ್ತೋಲೆ ಹೊರಡಿಸುವುದು ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ 1 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ ಮತ್ತು ಭಾಷಾ ವಿಷಯಗಳ ಯಾವುದೇ ಪಠ್ಯಗಳಲ್ಲಿ ಇರಬಹುದಾದ ಯಾವುದೇ ಸಮುದಾಯದ ಭಾವನೆಗಳಿಗೆ ದಕ್ಕೆ ತರಬಹುದಾದ ವಿಷಯಗಳ ಕುರಿತು ಶಿಕ್ಷಕರು ಹಾಗೂ ತಜ್ಞರನ್ನೊಳಗೊಂಡ ಸಮಿತಿಯೊಂದನ್ನು ರಚಿಸಿ ಅವರಿಂದ 15 ದಿನಗಳ ಒಳಗೆ ವರದಿ ಪಡೆದು ಸಲ್ಲಿಸಲು ಕ್ರಮ ವಹಿಸುವುದು. ನಂತರ ಈ ವರದಿಯನ್ನು ಪರಾಮರ್ಶಿಸಲು ಉನ್ನತ ಮಟ್ಟದ ತಜ್ಞರ ಸಮಿತಿಗೆ ಸದಸ್ಯರನ್ನು ಹೆಸರಿಸಲಾಗುವುದು ಎಂದು ಸೂಚಿಸಲಾಗಿರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು ರವರು ಮಾನ್ಯ ಸಚಿವರ ಸೂಚನೆಯನ್ವಯ ಮೇಲೆ ಓದಲಾದ ಕ್ರಮಾಂಕ(2)ರಲ್ಲಿ 6ನೇ ತರಗತಿ ಸಮಾಜ ವಿಜ್ಞಾನ ಭಾಗ–1ರಲ್ಲಿನ ಪಾಠ–7 ಹೊಸಧರ್ಮಗಳ ಉದಯ ಈ ಪಾಠದಲ್ಲಿನ 82 ಮತ್ತು 83 ರಲ್ಲಿನ ವಿಷಯಾಂಶಗಳನ್ನು, 2020–2021 ನೇ ಶೈಕ್ಷಣಿಕ ಸಾಲಿಗೆ ಬೋಧನೆ ಕಲಿಕೆಗೆ / ಮೌಲ್ಯ ಮಾಪನಕ್ಕೆ ಪರಿಗಣಿಸದಿರುವಂತೆ ನಿಮ್ಮ ಹಂತದಿಂದ ಸಂಬಂಧಿಸಿದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಮುಖ್ಯ ಶಿಕ್ಷಕರಿಗೆ ಸೂಕ್ತ ಸೂಚನೆ ನೀಡಲು ತಿಳಿಸಿ, ಬೋಧನೆ–ಕಲಿಕೆಗೆ/ಮೌಲ್ಯ ಮಾಪನಕ್ಕೆ ಪರಿಗಣಿಸದಿರುವ ಅಂಶಗಳನ್ನು ಅನುಬಂಧದಲ್ಲಿ ವಿವರಿಸಿ ರಾಜ್ಯದ ಎಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸುತ್ತೋಲೆ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಟ್ಯ ಪುಸ್ತಕ ಸಂಘ (ರಿ), ಬೆಂಗಳೂರು ಇವರು 6ನೇ ತರಗತಿಯ ಸಮಾಜ ವಿಜ್ಞಾನ ಭಾಗ–1ರ ಪಠ್ಯ ಪುಸ್ತಕದ ಪಾಠ 7ರಲ್ಲಿ ಹೊಸ ಧರ್ಮಗಳ ಉದಯ ಕುರಿತಾಗಿದ್ದು ಈ ಪಾಠದ ಪ್ರಾರಂಭದಲ್ಲಿ ಪೀಠಿಕಾ ರೂಪದಲ್ಲಿ ಬೌದ್ಧ ಧರ್ಮ ಹಾಗೂ ಜೈನ ಧರ್ಮ ಉಗಮಕ್ಕೆ ಸಂಬಂಧಿಸಿದಂತೆ ಹೊಸ ಧರ್ಮಗಳು ಏಕೆ ಉದಯವಾದವು ಎಂಬ ಶೀರ್ಷಿಕೆಯಡಿಯಲ್ಲಿ ಧರ್ಮದ

(12)

ಉದಯಕ್ಕೆ ಕಾರಣಗಳನ್ನು ಬರೆಯಲಾಗಿದೆ. 6ನೇ ತರಗತಿ ಸಮಾಜ ವಿಜ್ಞಾನ ಭಾಗ -I ಪಠ್ಯ ಪುಸ್ತಕದ ಪುಟ ಸಂಖ್ಯೆ 82 ಹಾಗೂ 83ರಲ್ಲಿನ ಹೊಸ ಧರ್ಮಗಳು ಏಕೆ ಉದಯಿಸಿದವು ಎಂಬ ಶೀರ್ಷಿಕೆಯಡಿಯಲ್ಲಿರುವ 6ನೇ ತರಗತಿಯ ಸಮಾಜ ವಿಜ್ಞಾನ ಭಾಗ-1ರ ಪುಟ ಸಂಖ್ಯೆ 82ರ ಹೊಸಧರ್ಮಗಳು ಏಕೆ ಉದಯಸಿದವು ಎಂಬ ಶೀರ್ಷಿಕೆಯಡಿಯಲ್ಲಿ ಎರಡು ಪ್ಯಾರಾಗಳು ಮತ್ತು ಪುಟ ಸಂಖ್ಯೆ 83ರ ಪ್ರಾರಂಭಿಕ ಆರು ಸಾಲುಗಳನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಎಲ್ಲಾ 7 ಮಾಧ್ಯಮಗಳ ಪಠ್ಯ ಪುಸ್ತಕದಿಂದ ಕೈಬಿಡಲು ಹಾಗೂ 1 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ, ಪರಿಸರ ಅಧ್ಯಯನ ಮತ್ತು ಭಾಷಾ ವಿಷಯಗಳ ಪಠ್ಯಗಳಲ್ಲಿ ಇರಬಹುದಾದ ಸಂಕೀರ್ಣ ವಿಚಾರಗಳ ಬಗ್ಗೆ ಮತ್ತೊಮ್ಮೆ ಪರೀಶಿಲಿಸಿ ವರದಿ ನೀಡಲು ಶ್ರೀ ರೋಹಿತ್ ಚಕ್ರತೀರ್ಥ, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಮಿತಿಯು ವರದಿ ನೀಡುವ ಸಂಬಂಧ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಪಿಎಂಸಿ 2021, ಬೆಂಗಳೂರು, ದಿನಾಂಕ: 08-09-2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 6ನೇ ತರಗತಿಯ ಸಮಾಜ ವಿಜ್ಞಾನ ಭಾಗ-1ರ ಪುಟ ಸಂಖ್ಯೆ 82ರ ಹೊಸಧರ್ಮಗಳು ಏಕೆ ಉದಯಸಿದವು ಎಂಬ ಶೀರ್ಷಿಕೆಯಡಿಯಲ್ಲಿ ಎರಡು ಪ್ಯಾರಾಗಳು ಮತ್ತು ಪುಟ ಸಂಖ್ಯೆ 83ರ ಪ್ರಾರಂಭಿಕ ಆರು ಸಾಲುಗಳನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಎಲ್ಲಾ 7 ಮಾಧ್ಯಮಗಳ ಪಠ್ಯ ಪುಸ್ತಕದಿಂದ ಕೈಬಿಡಲು ಹಾಗೂ 1 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ, ಪರಿಸರ ಅಧ್ಯಯನ ಮತ್ತು ಭಾಷಾ ವಿಷಯಗಳ ಪಠ್ಯಗಳಲ್ಲಿ ಇರಬಹುದಾದ ಸಂಕೀರ್ಣ ವಿಚಾರಗಳ ಬಗ್ಗೆ ಮತ್ತೊಮ್ಮೆ ಪರಿಶೀಲಿಸಿ ವರದಿ ನೀಡಲು ಶ್ರೀ ರೋಹಿತ್ ಚಕ್ರತೀರ್ಥ, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ಕೆಳಕಂಡಂತೆ ರಚಿಸಲಾಗಿರುವ ಸದಸ್ಯರುಗಳನ್ನೊಳಗೊಂಡ ಪರಿಶೀಲನಾ ಸಮಿತಿಯು ಒಂದು ತಿಂಗಳೊಳಗೆ ವರದಿ ನೀಡುವಂತೆ ಆದೇಶಿಸಿದೆ.

| ಕ್ರಸಂ | ಸಮಿತಿ | ಪದನಾಮ | ದೂರವಾಣಿ ಸಂಖ್ಯೆ |
|---|---|---|---|
| 01 | ಶ್ರೀ ರೋಹಿತ್ ಚಕ್ರತೀರ್ಥ, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ. | ಅಧ್ಯಕ್ಷರು | 9242825259<br>9449853140 |
| 02 | ಡಾ.ರಾಜರಾಮ್ ಹೆಗ್ಗಡೆ, ನಿವೃತ್ತ ವಿಭಾಗದ ಮುಖ್ಯಸ್ಥರು, ಇತಿಹಾಸ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಿವಮೊಗ್ಗ. | ಸದಸ್ಯರು | 9448682997 |
| 03 | ಶ್ರೀ ಸತ್ಯಪ್ರಕಾಶ್, ನಿವೃತ್ತ ಮುಖ್ಯೋಪಾಧ್ಯಾಯರು, ವಿ.ವಿ.ಎಸ್.ಪ್ರೌಢಶಾಲೆ, ಬೆಂಗಳೂರು. | ಸದಸ್ಯರು | 9986365393 |
| 4 | ಶ್ರೀ ರಂಗನಾಥ, ಪ್ರಾಂಶುಪಾಲರು, ರಾಷ್ಟ್ರೋತ್ಥಾನ ವಿದ್ಯಾಕೇಂದ್ರ, ಹಗರಿಬೊಮ್ಮನಹಳ್ಳಿ, ಬಳ್ಳಾರಿ ಜಿಲ್ಲೆ. | ಸದಸ್ಯರು | 9481291834 |
| 5 | ಶ್ರೀ ಬಿ.ಜಿ.ವಾಸುಕಿ, ಸಹ ಶಿಕ್ಷಕರು, ವಿವೇಕಾನಂದ ಗಿರಿಜನ ಪ್ರೌಢಶಾಲೆ, ಬಿಳಿಗಿರಿರಂಗನ ಬೆಟ್ಟ, ಯಳಂದೂರು, ತಾ., ಚಾಮರಾಜನಗರ ಜಿಲ್ಲೆ. | ಸದಸ್ಯರು | 9483956030 |
| 6 | ಡಾ: ಅನಂತಕೃಷ್ಣ ಭಟ್, ಕೊಡಿಯಾಲಗುತ್ತು, ದ್ವಾರಕ, ಕೊಡಿಯಾಲ್ ಬೈಲ್, ಎರಡನೇ ಅಡ್ಡ ರಸ್ತೆ, ಮಂಗಳೂರು-575 003. | ಸದಸ್ಯರು | 9886092230 |

| | | | |
|---|---|---|---|
| 7 | ಶ್ರೀ ವಿಠಲ್ ಮೋತೇದಾರ್,<br>ಸಂಶೋಧಕರು, ಮಿಥಿಕ್ ಸೊಸೈಟಿ, ಬೆಂಗಳೂರು | ಸದಸ್ಯರು | 9483760872 |
| 8 | ಶ್ರೀ ಮಂಜುನಾಥ್, ಸಹ ಶಿಕ್ಷಕರು, ನ್ಯಾಷನಲ್ ಪ್ರೌಢಶಾಲೆ, ಬೆಂಗಳೂರು (ಸಮಾಜ ವಿಜ್ಞಾನ) | ಸದಸ್ಯರು | 9449694639 |
| 9 | ಶ್ರೀ ಸಂದೀಪ್ ಕುಮಾರ್, ಸಹ ಶಿಕ್ಷಕರು, ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ, ಸಿದ್ಧನ ಹೊಸಹಳ್ಳಿ, ಬೆಂಗಳೂರು ಉತ್ತರ ವಲಯ-1,<br>(ಸಮಾಜ ವಿಜ್ಞಾನ) | ಸದಸ್ಯರು | 7892209653 |
| 10 | ಶ್ರೀಮತಿ ರಾಧಾ.ಪಿ, ಹಿರಿಯ ಉಪನ್ಯಾಸಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಚಿಕ್ಕಬಳ್ಳಾಪುರ (ಸಮಾಜ ವಿಜ್ಞಾನ) | ಸದಸ್ಯರು | 9481785855 |
| 11 | ಡಾ:ಎಮ್.ಜೆ.ಸುಂದರ್ ರಾಮ್, ನಿವೃತ್ತ ಪ್ರೊಫೆಸರ್ (ಪ್ರಾಣಿ ಶಾಸ್ತ್ರ), ಫ್ಲಾಟ್ ಸಂಖ್ಯೆ 308, 1 ನೇ ಅಡ್ಡ ರಸ್ತೆ, 3ನೇ ಮುಖ್ಯ ರಸ್ತೆ, 6ನೇ ಬ್ಲಾಕ್, 2ನೇ ಫೇಸ್, ಬನಶಂಕರಿ 3ನೇ ಹಂತ, ಬೆಂಗಳೂರು-560085<br>(ಪರಿಸರ ಅಧ್ಯಯನ) | ಸದಸ್ಯರು | 9901853160 |
| 12 | ಶ್ರೀಮತಿ ಆರ್.ಎಸ್.ವಸಂತ ಸುಜಯ್, ಸಹ ಶಿಕ್ಷಕರು, ಕರ್ನಾಟಕ ಪಬ್ಲಿಕ್ ಸ್ಕೂಲ್ (ಪ್ರೌಢಶಾಲೆ) ಪೊಲೀಸ್ ಸ್ಟೇಷನ್ ಹತ್ತಿರ, ಹೆಬ್ಬಾಳ, ಬೆಂಗಳೂರು-560024 (ಪರಿಸರ ಅಧ್ಯಯನ) | ಸದಸ್ಯರು | 9886539513<br>8892374043 |
| 13 | ಡಾ:ರೋಹಿಣಾಕ್ಷ, ಸಹಾಯಕ ಪ್ರಾಧ್ಯಾಪಕರು, ಜಾನಪದ ಶಾಸ್ತ್ರ ಮತ್ತು ಬುಡಕಟ್ಟು ಅಧ್ಯಯನ ವಿಭಾಗ, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ, ಕಡಗಂಚಿ, ಆಳಂದ ರಸ್ತೆ, ಕಲಬುರಗಿ-585367 (ಕನ್ನಡ) | ಸದಸ್ಯರು | 9449663744 |
| 14 | ಶ್ರೀ ಚಿಕ್ಕದೇವೇಗೌಡ, ಕನ್ನಡ ಭಾಷಾ ಶಿಕ್ಷಕರು, ಕರ್ನಾಟಕ ಪಬ್ಲಿಕ್ ಶಾಲೆ, ಉತ್ತರಹಳ್ಳಿ ಬೆಂಗಳೂರು, ದಕ್ಷಿಣ ವಲಯ-1, ಬೆಂಗಳೂರು-560061<br>(ಕನ್ನಡ) | ಸದಸ್ಯರು | 9880896070 |
| 15 | ಶ್ರೀಮತಿ ಸುಶೀಲಾ, ಸಹ ಶಿಕ್ಷಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರೌಢಶಾಲಾ ವಿಭಾಗ, ಮದ್ದೂರು, ಮಂಡ್ಯ ಜಿಲ್ಲೆ -571428<br>(ಕನ್ನಡ) | ಸದಸ್ಯರು | 9986534485 |
| 16 | ಡಾ.ಎಂ.ವಿ.ಕೃಷ್ಣಮೂರ್ತಿ, ಹಿರಿಯ ಸಹಾಯಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ (ರಿ), ಬೆಂಗಳೂರು | ಕಾರ್ಯಕ್ರಮ ಸಂಯೋಜಕರು | 9449059351 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಹೆಚ್. ಎಸ್. 8/9/2021

(ಹೆಚ್.ಎಸ್.ಶಿವಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಪ್ರಾಥಮಿಕ)

ಇವರಿಗೆ :

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು,
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ (ರಿ), ಬೆಂಗಳೂರು.

4. ಪರಿಶೀಲನಾ ಸಮಿತಿಯ ಅಧ್ಯಕ್ಷರು, ಸದಸ್ಯರುಗಳು ಹಾಗೂ ಕಾರ್ಯಕ್ರಮ ಸಂಯೋಜಕರು (ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು ರವರ ಮುಖಾಂತರ)

ಪ್ರತಿ:

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ(ಸೇವೆಗಳು-1), ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ ಮಾಹಿತಿ ಕೇಂದ್ರ/ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:* 1 ರಿಂದ 10ನೇ ತರಗತಿಯ ಕನ್ನಡ ಭಾಷಾ ವಿಷಯಗಳು, ಪರಿಸರ ಅಧ್ಯಯನ ಹಾಗೂ 6 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ ವಿಷಯಗಳ ಪರಿಷ್ಕೃತ ಪಠ್ಯಪುಸ್ತಕಗಳನ್ನು ಮಾರ್ಪಡಿಸಿ 2022-23ನೇ ಸಾಲಿಗೆ ಅಳವಡಿಸಿ ತಿದ್ದೋಲೆ ಹೊರಡಿಸುವ ಬಗ್ಗೆ - ಆದೇಶ.

*ಓದಲಾಗಿದೆ:*

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಟಿಪ್ಪಣಿ ಸಂಖ್ಯೆ: ಪ್ರಾ.ಪೌ್ರಸ.-9992/ಬಿ/2020-21, ದಿನಾಂಕ: 17-12-2020.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ: ಎ1-ಕರ್ನಾಟಕ ಪಠ್ಯ ಪುಸ್ತಕ ಸಂಘ(ರಿ) / 6ನೇ ತರಗತಿ ಸಮಾಜ ವಿಜ್ಞಾನ/ಸಂ/ಇತರೆ/09/2021, ದಿನಾಂಕ:17-02-2021.
3. ಏಕ ಕಡತ ಸಂಖ್ಯೆ: ಎ1-ಕರ್ನಾಟಕ ಪಠ್ಯ ಪುಸ್ತಕ ಸಂಘ(ರಿ) / 6ನೇ ತರಗತಿ ಸಮಾಜ ವಿಜ್ಞಾನ/ಸಂ/ಇತರೆ/09/2021.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಪಿಎಂಸಿ 2021, ಬೆಂಗಳೂರು, ದಿನಾಂಕ: 08-09-2021.
5. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 27-01-2022 ರಂದು ನಡೆದ ಸಭೆ ನಡವಳಿ ಹಾಗೂ ಅಧ್ಯಕ್ಷರು, ಕರ್ನಾಟಕ ಪಠ್ಯ ಪುಸ್ತಕಗಳ ಪರಿಶೀಲನಾ ಸಮಿತಿ ರವರು ಸಲ್ಲಿಸಿರುವ ಸಮಗ್ರ ವರದಿ ದಿನಾಂಕ: 08-03-2022.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು-560085 ರವರ ಏಕಕಡತ ಸಂಖ್ಯೆ: ಎ1ಕ.ಪ.ಪು.ಸಂ./ಪಠ್ಯ.ಪು.ಪರಿಷ್ಕೃತ/ಇತರೆ/05/2021-22, ದಿನಾಂಕ: 09-03-2022.
7. ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಪಿಎಂಸಿ 2021, ಬೆಂಗಳೂರು, ದಿನಾಂಕ: 19-03-2022.

24/6/22

8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು-560085 ರವರ ಏಕ ಕಡತ ಸಂಖ್ಯೆ: ಎ1/ಕ.ಪ.ಪು.ಸಂ./ಪ.ತಿದ್ದೋಲೆ/ಏಕಕಡತ/ಇತರೆ/09/2022-23, ದಿನಾಂಕ: 23-06-2022.

*****

ಪ್ರಸ್ತಾವನೆ:

ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ದಿನಾಂಕ:17-12-2021 ರ ಟಿಪ್ಪಣಿಯಲ್ಲಿ 6ನೇ ತರಗತಿಯ ಸಮಾಜ ವಿಜ್ಞಾನ ಭಾಗ-1ರ ಪುಟ ಸಂಖ್ಯೆ 82 ಮತ್ತು 83 ರಲ್ಲಿರುವ ಹೊಸಧರ್ಮಗಳು ಏಕೆ ಉದಯಿಸಿದವು ಎಂಬ ಪೀಠಿಕಾ ಸ್ವರೂಪದ ಅನಗತ್ಯ ಹಾಗೂ ಆ ತರಗತಿಯ ಮಕ್ಕಳ ವಯೋಮಾನಕ್ಕೆ ಮೀರಿದ ಪಠ್ಯ ಬೋಧನೆಯನ್ನು ಈ ಶೈಕ್ಷಣಿಕ ಸಾಲಿನಿಂದ ಕೈಬಿಡಲು ಕೂಡಲೇ ಅಗತ್ಯ ಸುತ್ತೋಲೆ ಹೊರಡಿಸುವುದು ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ 1 ರಿಂದ 10ನೇ ತರಗತಿಯ ಕನ್ನಡ ಭಾಷಾ ವಿಷಯಗಳು ಹಾಗೂ 6 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ ವಿಷಯಗಳ ಯಾವುದೇ ಪಠ್ಯಗಳಲ್ಲಿ ಇರಬಹುದಾದ ಯಾವುದೇ ಸಮುದಾಯದ ಭಾವನೆಗಳಿಗೆ ಧಕ್ಕೆ ತರಬಹುದಾದ ವಿಷಯಗಳ ಕುರಿತು ಶಿಕ್ಷಕರು ಹಾಗೂ ತಜ್ಞರನ್ನೊಳಗೊಂಡ ಸಮಿತಿಯೊಂದನ್ನು ರಚಿಸಿ ಅವರಿಂದ 15 ದಿನಗಳ ಒಳಗೆ ವರದಿ ಪಡೆದು ಸಲ್ಲಿಸಲು ಕ್ರಮ ವಹಿಸುವುದು. ನಂತರ ಈ ವರದಿಯನ್ನು ಪರಾಮರ್ಷಿಸಲು ಉನ್ನತ ಮಟ್ಟದ ತಜ್ಞರ ಸಮಿತಿಗೆ ಸದಸ್ಯರನ್ನು ಹೆಸರಿಸಲಾಗುವುದು ಎಂದು ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಸೂಚಿಸಲಾಗಿರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು ರವರು 6ನೇ ತರಗತಿ ಸಮಾಜ ವಿಜ್ಞಾನ ಭಾಗ-1ರಲ್ಲಿನ ಪಾಠ-7 ಹೊಸಧರ್ಮಗಳು ಏಕೆ ಉದಯಿಸಿದವು ಈ ಪಾಠದಲ್ಲಿನ 82 ಮತ್ತು 83 ರಲ್ಲಿನ ವಿಷಯಾಂಶಗಳನ್ನು, 2020-2021ನೇ ಶೈಕ್ಷಣಿಕ ಸಾಲಿಗೆ ಬೋಧನೆ ಕಲಿಕೆಗೆ / ಮೌಲ್ಯ ಮಾಪನಕ್ಕೆ ಪರಿಗಣಿಸದಿರುವಂತೆ ನಿಮ್ಮ ಹಂತದಿಂದ ಸಂಬಂಧಿಸಿದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಮುಖ್ಯ ಶಿಕ್ಷಕರಿಗೆ ಸೂಕ್ತ ಸೂಚನೆ ನೀಡಲು ತಿಳಿಸಿ, ಬೋಧನೆ-ಕಲಿಕೆಗೆ/ಮೌಲ್ಯ ಮಾಪನಕ್ಕೆ ಪರಿಗಣಿಸದಿರುವ ಅಂಶಗಳನ್ನು ಅನುಬಂಧದಲ್ಲಿ ವಿವರಿಸಿ ರಾಜ್ಯದ ಎಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾನ್ಯ ಸಚಿವರ ಸೂಚನೆಯನ್ವಯ ಮೇಲೆ ಓದಲಾದ ಕ್ರಮಾಂಕ(2)ರಲ್ಲಿ ಸುತ್ತೋಲೆ ಹೊರಡಿಸಲಾಗಿರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ (ರಿ), ಬೆಂಗಳೂರು ಇವರು 6ನೇ ತರಗತಿಯ ಸಮಾಜ ವಿಜ್ಞಾನ ಭಾಗ-1ರ ಪುಟ ಸಂಖ್ಯೆ: 82ರ ಹೊಸಧರ್ಮಗಳು ಏಕೆ ಉದಯಿಸಿದವು ಎಂಬ ಶೀರ್ಷಿಕೆಯಡಿಯಲ್ಲಿ ಎರಡು ಪ್ಯಾರಾಗಳು ಮತ್ತು ಪುಟ ಸಂಖ್ಯೆ 83ರ ಪ್ರಾರಂಭಿಕ ಆರು ಸಾಲುಗಳನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಎಲ್ಲಾ 7 ಮಾಧ್ಯಮಗಳ ಪಠ್ಯ ಪುಸ್ತಕದಿಂದ ಕೈಬಿಡಲು ಹಾಗೂ 6 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ, ಪರಿಸರ ಅಧ್ಯಯನ ಮತ್ತು 1 ರಿಂದ 10ನೇ ತರಗತಿಯ ಕನ್ನಡ ಭಾಷಾ ವಿಷಯಗಳ ಪಠ್ಯಗಳಲ್ಲಿ ಇರಬಹುದಾದ ಸಂಕೀರ್ಣ ವಿಚಾರಗಳ ಬಗ್ಗೆ ಮತ್ತೊಮ್ಮೆ ಪರೀಶಿಲಿಸಿ ವರದಿ ನೀಡಲು ಶ್ರೀ ರೋಹಿತ್ ಚಕ್ರತೀರ್ಥ, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಮಿತಿಯು ವರದಿ ನೀಡುವ ಸಂಬಂಧ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ಏಕಕಡತದ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಅದರಂತೆ, 6ನೇ ತರಗತಿಯ ಸಮಾಜ-ವಿಜ್ಞಾನ ಭಾಗ-1ರ ಪುಟ ಸಂಖ್ಯೆ 82ರ ಹೊಸಧರ್ಮಗಳು ಏಕೆ ಉದಯಿಸಿದವು ಎಂಬ ಶೀರ್ಷಿಕೆಯಡಿಯಲ್ಲಿ ಎರಡು ಪ್ಯಾರಾಗಳು ಮತ್ತು ಪುಟ ಸಂಖ್ಯೆ 83ರ ಪ್ರಾರಂಭಿಕ ಆರು ಸಾಲುಗಳನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಎಲ್ಲಾ 7 ಮಾಧ್ಯಮಗಳ ಪಠ್ಯ ಪುಸ್ತಕಗಳಿಂದ ಕೈಬಿಡಲು ಹಾಗೂ 1 ರಿಂದ 10ನೇ ತರಗತಿಯ ಭಾಷಾ ವಿಷಯಗಳು, ಪರಿಸರ ಅಧ್ಯಯನ ಹಾಗೂ 6 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ ವಿಷಯಗಳಲ್ಲಿ ಇರಬಹುದಾದ ಸೂಕ್ಷ್ಮ/ಸಂಕೀರ್ಣ ವಿಷಯಗಳನ್ನು ಕುರಿತು ಪರಿಶೀಲಿಸಿ ವರದಿ ನೀಡಲು ಶ್ರೀ ರೋಹಿತ್ ಚಕ್ರತೀರ್ಥ, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಒಂದು ತಿಂಗಳೊಳಗೆ ವರದಿ ನೀಡುವಂತೆ ಆದೇಶಿಸಲಾಗಿದ್ದರನ್ವಯ 1 ರಿಂದ 10ನೇ ತರಗತಿ ಕನ್ನಡ ಭಾಷಾ ವಿಷಯಗಳು, 2 ಮತ್ತು 4 ನೇ ತರಗತಿಗಳ ಪರಿಸರ ಅಧ್ಯಯನ ಹಾಗೂ 6 ರಿಂದ 10ನೇ ತರಗತಿ ಸಮಾಜ ವಿಜ್ಞಾನ ಪಠ್ಯ ಪುಸ್ತಕಗಳನ್ನು ಪರಿಷ್ಕರಿಸಿದ್ದು, ಪರಿಷ್ಕರಿಸಿರುವ ಪಠ್ಯ ಪುಸ್ತಕಗಳನ್ನು 2022-23ನೇ ಸಾಲಿಗೆ ಅಳವಡಿಸಿಕೊಳ್ಳಲು ಹಾಗೂ ಮುದ್ರಿಸಿ ವಿತರಿಸಲು ಆದೇಶ ಹೊರಡಿಸುವಂತೆ ಮೇಲೆ ಓದಲಾದ ಕ್ರಮಾಂಕ(5)ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು ರವರ ಸಮುಚಿತ ಮಾರ್ಗದ ಮುಖಾಂತರ ವರದಿ ಸಲ್ಲಿಸಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು-560085 ರವರು ಮೇಲೆ ಓದಲಾದ ಕ್ರಮಾಂಕ(6)ರ ಏಕ ಕಡತ ಸಂಖ್ಯೆ:ಏಕ.ಪ.ಪು.ಸಂ./ಪಠ್ಯಪು.ಪರಿಷ್ಕೃತ/ಇತರೆ/05/2021-22ರಲ್ಲಿ ಪ್ರಸ್ತಾವನೆ ಸಲ್ಲಿಸಿದ್ದು, ಅದರನ್ವಯ ಮೇಲೆ ಓದಲಾದ ಕ್ರಮಾಂಕ (7)ರಲ್ಲಿ ಶ್ರೀ ರೋಹಿತ್ ಚಕ್ರತೀರ್ಥ,

ಅಧ್ಯಕ್ಷರು ಹಾಗೂ ಸದಸ್ಯರುಗಳ ಸಮಿತಿಯು ಪರಿಷ್ಕರಿಸಿ ನೀಡಿರುವ 1 ರಿಂದ 10 ನೇ ತರಗತಿ ಕನ್ನಡ ಭಾಷಾ ವಿಷಯಗಳ ಪಠ್ಯ ಪುಸ್ತಕಗಳು, 6 ರಿಂದ 10ನೇ ತರಗತಿ ಸಮಾಜ ವಿಜ್ಞಾನ ಪಠ್ಯ ಪುಸ್ತಕಗಳು ಹಾಗೂ 2 ಮತ್ತು 4ನೇ ತರಗತಿಗಳ ಪರಿಸರ ಅಧ್ಯಯನದ ಪಠ್ಯ ಪುಸ್ತಕಗಳನ್ನು ಪರಿಷ್ಕೃತಗೊಳಿಸಿರುವುದಕ್ಕೆ ಘಟನೋತ್ತರ ಅನುಮತಿ ನೀಡಿ, 6 ರಿಂದ 8ನೇ ತರಗತಿಯ ಸಮಾಜ ವಿಜ್ಞಾನದ 7 ಮಾಧ್ಯಮದ 68 ಪರಿಷ್ಕೃತ ಪಠ್ಯಪುಸ್ತಕಗಳು ಹಾಗೂ 1 ರಿಂದ 10ನೇ ತರಗತಿಯ ಕನ್ನಡ ಭಾಷಾ ವಿಷಯದ 15 ಪರಿಷ್ಕೃತ ಪಠ್ಯಪುಸ್ತಕಗಳನ್ನು (ಒಟ್ಟು 83 ಪರಿಷ್ಕೃತ ಪಠ್ಯಪುಸ್ತಕಗಳು) 2022–23ನೇ ಶೈಕ್ಷಣಿಕ ಸಾಲಿಗೆ ಮುದ್ರಿಸಿ ವಿತರಿಸಲು ಆದೇಶಿಸಲಾಗಿತ್ತು.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು–560085 ರವರು ಮೇಲೆ ಓದಲಾದ ಕ್ರಮಾಂಕ(8)ರ ಏಕ ಕಡತ ಸಂಖ್ಯೆ:ಎ1/ಕ.ಪ.ಪು.ಸಂ./ಪ ತಿದ್ದೋಲೆ/ಏಕ ಕಡತ/ಇತರೆ/09/2022–23ರಲ್ಲಿ ಈ ಕೆಳಕಂಡಂತೆ ಅನುಷ್ಠಾನಗೊಳಿಸಲು ಆದೇಶ ಕೋರಿರುತ್ತಾರೆ.

1) 9ನೇ ತರಗತಿ ಸಮಾಜ ವಿಜ್ಞಾನ ಭಾಗ–01ರ ನಮ್ಮ ಸಂವಿಧಾನ ಎಂಬ ಪಾಠದಲ್ಲಿ ಸಂವಿಧಾನದ ಕರಡು ರಚನೆ ಸಮಿತಿ ಬಗ್ಗೆ ಉಲ್ಲೇಖಿವಿರುತ್ತದೆ. ಅದರಲ್ಲಿ ಪರಿಷ್ಕೃತ ಪಠ್ಯದಲ್ಲಿ ಇವರು ಸಂವಿಧಾನ ರಚನೆಗೆ ನೀಡಿದ ಕೊಡುಗೆಯನ್ನು ಆಧರಿಸಿ ಅವರನ್ನು `ಸಂವಿಧಾನದ ಶಿಲ್ಪಿ' ಎಂದು ಕರೆಯಲಾಗಿದೆ ಎಂಬ ವಾಕ್ಯವು ಇಲ್ಲವಾಗಿದ್ದು, ಇದನ್ನು ಪುನರ್ ಸೇರ್ಪಡೆಮಾಡಿ, ತಿದ್ದೋಲೆಯಲ್ಲಿ ಹೊರಡಿಸಲು.

2) 7ನೇ ತರಗತಿ ಸಮಾಜ ವಿಜ್ಞಾನ ಭಾಗ–01ರ ಭಕ್ತಿ ಪಂಥ ಹಾಗೂ ಸೂಫಿ ಸಂತರು ಪಾಠವನ್ನು ಪೂರ್ಣವಾಗಿ ಕೈಬಿಡಲಾಗಿದೆ. 9ನೇ ತರಗತಿಯ ಸಮಾಜ ವಿಜ್ಞಾನ ವಿಷಯದ ಭಾಗ–2 ರಲ್ಲಿ ಭಕ್ತಿಪಂಥ ಎಂಬ ಅಧ್ಯಾಯದಲ್ಲಿ ಪುರಂದರದಾಸರು, ಕನಕದಾಸರು ಕುರಿತು ವಿಷಯಗಳು ಸಂಕ್ಷಿಪ್ತಗೊಳಿಸಲಾಗಿದೆ. ಆದ್ದರಿಂದ 2021–22 ನೇ ಸಾಲಿನ 7ನೇ ತರಗತಿಯ ಸಮಾಜ ವಿಜ್ಞಾನ ಭಾಗ–01ರ ಭಕ್ತಿ ಪಂಥ ಹಾಗೂ ಸೂಫಿ ಸಂತರು ಎಂಬ ಸಂಪೂರ್ಣ ಪಾಠವನ್ನು ತಿದ್ದೋಲೆಯಲ್ಲಿ ಹೊರಡಿಸಲು.

3) 7ನೇ ತರಗತಿಯ ಪ್ರಥಮ ಭಾಷೆ ಕನ್ನಡ ಪಠ್ಯಪುಸ್ತಕದ ಪುಟ ಸಂಖ್ಯೆ 147 ರಲ್ಲಿ 'ಗೊಂಬೆ ಕಲಿಸುವ ನೀತಿ' ಪದ್ಯದ ಕೃತಿಕಾರರ ಹೆಸರು ಡಾ. ಆರ್.ಎನ್.ಜಯಗೋಪಾಲ್ ಎಂದು ತಪ್ಪಾಗಿ ಮುದ್ರಣಗೊಂಡಿದ್ದು, ಮೂಲ ಕೃತಿಕಾರರಾದ ಜಿ.ಉದಯಶಂಕರ್‌ರವರ ಕವಿ ಪರಿಚಯವನ್ನು ಸೇರ್ಪಡೆಗೊಳಿಸಿ, ತಿದ್ದೋಲೆಯಲ್ಲಿ ಹೊರಡಿಸಲು.

4) 6ನೇ ತರಗತಿ ಸಮಾಜ ವಿಜ್ಞಾನ ಭಾಗ-1ರ ಪಾಠ 'ನಮ್ಮ ಹೆಮ್ಮೆಯ ರಾಜ್ಯ ಕರ್ನಾಟಕ' ಪಾಠದಲ್ಲಿ ಸಿದ್ಧಗಂಗಾ ಮಠ ಹಾಗೂ ಆದಿಚುಂಚನಗಿರಿ ಮಠದ ಕುರಿತಾದ ಸೇವೆಯ ಸಾಲುಗಳನ್ನು ಮನರ್ ಸೇರ್ಪಡೆ ಮಾಡಿ, ತಿದ್ದೋಲೆಯಲ್ಲಿ ಹೊರಡಿಸಲು.

5) 7ನೇ ತರಗತಿಯ ಸಮಾಜವಿಜ್ಞಾನ ಭಾಗ-1 ರ ಮೈಸೂರು ಮತ್ತು ಇತರ ಸಂಸ್ಥಾನಗಳು ಎಂಬ ಪಾಠದಲ್ಲಿದ್ದ ಸುರಮರ ನಾಯಕರ ಕುರಿತಾದ ವಿವರಗಳನ್ನು ಮರು ಸೇರ್ಪಡೆ ಮಾಡಿ, ತಿದ್ದೋಲೆಯಲ್ಲಿ ಹೊರಡಿಸಲು.

6) 9ನೇ ತರಗತಿಯ ಸಮಾಜ ವಿಜ್ಞಾನ ಭಾಗ-1ರ ಪಠ್ಯಮಸ್ತಕದಲ್ಲಿ ಭಾರತದ ಮತ ಪರಿವರ್ತಕರು ಎಂಬ ಅಧ್ಯಾಯದಲ್ಲಿ ಬಸವಣ್ಣನವರ ಕುರಿತಾದ ವಿಷಯಾಂಶವನ್ನು ಮಾರ್ಪಡಿಸಿ, ತಿದ್ದೋಲೆಯಲ್ಲಿ ಹೊರಡಿಸಲು.

7) 7ನೇ ತರಗತಿ ಸಮಾಜ ವಿಜ್ಞಾನ ಭಾಗ-2ರ ಪಠ್ಯಮಸ್ತಕದ 'ಕರ್ನಾಟಕ ರಾಜ್ಯ ಏಕೀಕರಣ ಹಾಗೂ ಗಡಿವಿವಾದಗಳು' ಎಂಬ ಪಾಠದಲ್ಲಿ ರಾಷ್ಟ್ರಕವಿ ಕುವೆಂಮ ರವರ ಹಾಗೂ ಹುಯಿಲಗೋಳ ನಾರಾಯಣರಾವ್ ರವರ ಭಾವಚಿತ್ರವನ್ನು ಅಳವಡಿಸಿ, ತಿದ್ದೋಲೆಯಲ್ಲಿ ಹೊರಡಿಸಲು.

8) 4ನೇ ತರಗತಿಯ ಪರಿಸರ ಅಧ್ಯಯನ "ಪ್ರತಿಯೊಬ್ಬರು ವಿಶಿಷ್ಟ" ಎಂಬ ಪಾಠದಲ್ಲಿ "ಸಾಹಿತ್ಯ ಕ್ಷೇತ್ರದಲ್ಲಿ ಹೆಸರು ಮಾಡಿದ ಕುವೆಂಮ ರವರಿಗೆ ಚಿಕ್ಕಂದಿನಿಂದಲು ಕಥೆ, ಕವನ, ಮಸ್ತಕ ಓದುವ, ಬರೆಯುವ ಅಭ್ಯಾಸ ಇತ್ತು. ಅನೇಕರ ಪ್ರೋತ್ಸಾಹದಿಂದ ಇವರು ಮುಂದೆ ಪ್ರಖ್ಯಾತ ಕವಿ ಎನಿಸಿಕೊಂಡರು" ಎಂಬ ಸಾಲುಗಳನ್ನು ಕೈಬಿಡುವ ಕುರಿತು ತಿದ್ದೋಲೆಯಲ್ಲಿ ಹೊರಡಿಸಲು.

9) ಪರಿಷ್ಕೃತ ಪಠ್ಯಮಸ್ತಕಗಳ ವಿಷಯಾಂಶಗಳಿಗೆ ಇನ್ನು ಮುಂದೆ ಬರುವ ಅಭಿಪ್ರಾಯಗಳಿಗೆ ಸರ್ಕಾರದ ಅನುಮತಿ ಪಡೆದು ಸುತ್ತೋಲೆ ಹೊರಡಿಸಲು.

10) ಅಗತ್ಯವಿರುವ ತಿದ್ದೋಲೆ ಪ್ರತಿಗಳನ್ನು ಮುದ್ರಿಸಲು ಕರ್ನಾಟಕ ಪಠ್ಯಮಸ್ತಕ ಸಂಘದಿಂದ ಈಗಾಗಲೇ ಪಠ್ಯಮಸ್ತಕಗಳ ಮುದ್ರಣಕ್ಕೆ ಕಾರ್ಯಾದೇಶ ಪಡೆದಿರುವ ಎಲ್-1 ದರ ನಮೂದಿಸಿರುವ ಮುದ್ರಕರಿಂದ ಮುದ್ರಿಸಿ, ಕರ್ನಾಟಕ ಪಠ್ಯಮಸ್ತಕ ಸಂಘದ ಲಭ್ಯವಿರುವ ಅನುದಾನವನ್ನು ಭರಿಸಿ, ಎಲ್ಲಾ ಸರ್ಕಾರಿ, ಅನುದಾನಿತ ಶಾಲೆಗಳಿಗೆ ಹಾಗೂ ಅನುದಾನರಹಿತ ಶಾಲೆಗಳಿಗೆ ಉಚಿತವಾಗಿ ತಲಾ ಒಂದು ಪ್ರತಿಯಂತೆ ವಿತರಿಸಲು.

11) ತಿದ್ದೋಲೆಯ ವಿಷಯಾಂಶಗಳನ್ನು ಕರ್ನಾಟಕ ಪಠ್ಯಪುಸ್ತಕ ಸಂಘದ ಜಾಲತಾಣದಲ್ಲಿ ಪ್ರಕಟಿಸಲು ಅನುಮತಿ ಕೋರಿ ಮತ್ತು ಮೂಲ ಪುಸ್ತಕದ ಸಾಫ್ಟ್ ಪ್ರತಿಯಲ್ಲಿ ತಿದ್ದುಪಡಿಯೊಂದಿಗೆ

ಮುಂದುವರೆದು, 2014–15, 2017–18ರ ಸಾಲಿನಲ್ಲಿ ಪಠ್ಯಪುಸ್ತಕಗಳ ಸಮಿತಿಯನ್ನು ರಚಿಸಿ, ಪರಿಷ್ಕರಿಸಿ ಪಠ್ಯಪುಸ್ತಕಗಳನ್ನು ಕರ್ನಾಟಕ ಪಠ್ಯಪುಸ್ತಕ ಸಂಘದ ಜಾಲತಾಣದಲ್ಲಿ ಪ್ರಕಟಿಸಲಾಗಿರುತ್ತದೆ. ಅದರಂತೆ, 2022–23ನೇ ಸಾಲಿನಲ್ಲಿ ಪುನರ್ ಪರಿಷ್ಕರಿಸಿರುವ ಪಠ್ಯಪುಸ್ತಕಗಳನ್ನು ಕರ್ನಾಟಕ ಪಠ್ಯಪುಸ್ತಕ ಸಂಘದ ಜಾಲತಾಣದಲ್ಲಿ ಪ್ರಕಟಿಸಲಾಗಿದ್ದು, ಇವುಗಳಿಗೆ ಗಣ್ಯ ವ್ಯಕ್ತಿಗಳಿಂದ, ಪತ್ರಿಕೆಗಳು, ಸಾಮಾಜಿಕ ಜಾಲತಾಣಗಳಲ್ಲಿ, ಸುದ್ಧಿ ಮಾಧ್ಯಮಗಳಲ್ಲಿ ಬಿತ್ತರವಾಗುತ್ತಿರುವ / ಪ್ರಕಟವಾಗುತ್ತಿರುವುದರಿಂದ ಸಾರ್ವಜನಿಕರಿಂದ ಟೀಕೆ–ಟಿಪ್ಪಣಿಗಳು ಹಾಗೂ ಆಕ್ಷೇಪಣೆಗಳು ವ್ಯಕ್ತವಾದ ಹಿನ್ನೆಲೆಯಲ್ಲಿ, ಸದರಿ ಆಕ್ಷೇಪಣೆಗಳಿಗೆ ಸಂಬಂಧಪಟ್ಟಂತೆ ತಿದ್ದೋಲೆ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಇಡಿ 52 ಟಿಎಂಸಿ 2021 (ಭಾಗ–1), ಬೆಂಗಳೂರು, ದಿನಾಂಕ:23–06–2022.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈಗಾಗಲೇ ಪರಿಷ್ಕರಿಸಿರುವ ಪಠ್ಯಪುಸ್ತಕಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಬಿಟ್ಟುಹೋದ ಅಂಶಗಳನ್ನು ತಿದ್ದುಪಡಿ ಹಾಗೂ ಸೇರ್ಪಡೆ ಮಾಡಿ ತಿದ್ದೋಲೆ ಹೊರಡಿಸಲು ಅನುಮತಿ ನೀಡಿ ಆದೇಶಿಸಿದೆ.

1) 9ನೇ ತರಗತಿ ಸಮಾಜ ವಿಜ್ಞಾನ ಭಾಗ–01ರ ನಮ್ಮ ಸಂವಿಧಾನ ಎಂಬ ಪಾಠದಲ್ಲಿ ಸಂವಿಧಾನದ ಕರಡು ರಚನೆ ಸಮಿತಿ ಬಗ್ಗೆ ಉಲ್ಲೇಖವಿರುತ್ತದೆ. ಅದರಲ್ಲಿ ಪರಿಷ್ಕೃತ ಪಠ್ಯದಲ್ಲಿ ಇವರು ಸಂವಿಧಾನ ರಚನೆಗೆ ನೀಡಿದ ಕೊಡುಗೆಯನ್ನು ಆಧರಿಸಿ ಅವರನ್ನು "ಸಂವಿಧಾನದ ಶಿಲ್ಪಿ" ಎಂದು ಕರೆಯಲಾಗಿದೆ ಎಂಬ ವಾಕ್ಯವು ಇಲ್ಲವಾಗಿದ್ದು, "ಸಂವಿಧಾನದ ಶಿಲ್ಪಿ" ಎಂಬುದರ ಪುನರ್ ಸೇರ್ಪಡೆ.

2) 7ನೇ ತರಗತಿಯ ಸಮಾಜ ವಿಜ್ಞಾನ ಭಾಗ–01ರ ಭಕ್ತಿ ಪಂಥ ಹಾಗೂ ಸೂಫಿ ಸಂತರು ಪಾಠವನ್ನು ಪೂರ್ಣವಾಗಿ ಕೈಬಿಡಲಾಗಿದೆ. 9ನೇ ತರಗತಿಯ ಸಮಾಜ ವಿಜ್ಞಾನ ವಿಷಯದ ಭಾಗ–2 ರಲ್ಲಿ ಭಕ್ತಿಪಂಥ ಎಂಬ ಅಧ್ಯಾಯದಲ್ಲಿ ಪುರಂದರದಾಸರು, ಕನಕದಾಸರ ಕುರಿತು

ವಿಷಯಗಳು ಸಂಕ್ಷಿಪ್ತಗೊಳಿಸಲಾಗಿದೆ. ಆದ್ದರಿಂದ, 2021–22ನೇ ಸಾಲಿನ 7ನೇ ತರಗತಿಯ ಸಮಾಜ ವಿಜ್ಞಾನ ಭಾಗ–01ರ ಭಕ್ತಿ ಪಂಥ ಹಾಗೂ ಸೂಫಿ ಸಂತರು ಸಂಪೂರ್ಣ ಪಾಠ ಸೇರ್ಪಡೆ.

3) 7ನೇ ತರಗತಿಯ ಪ್ರಥಮ ಭಾಷೆ ಕನ್ನಡ ಪಠ್ಯಪುಸ್ತಕದ ಪುಟ ಸಂಖ್ಯೆ 147 ರಲ್ಲಿ 'ಗೊಂಬೆ ಕಲಿಸುವ ನೀತಿ' ಪದ್ಯದ ಕೃತಿಕಾರರ ಹೆಸರು ಡಾ. ಆರ್.ಎನ್.ಜಯಗೋಪಾಲ್ ಎಂದು ತಪ್ಪಾಗಿ ಮುದ್ರಣಗೊಂಡಿದ್ದು, ಮೂಲ ಕೃತಿಕಾರರಾದ ಚಿ.ಉದಯಶಂಕರ್ ರವರ ಕವಿ ಪರಿಚಯ.

4) 6ನೇ ತರಗತಿ ಸಮಾಜ ವಿಜ್ಞಾನ ಭಾಗ–1ರ ಪಾಠ 'ನಮ್ಮ ಹೆಮ್ಮೆಯ ರಾಜ್ಯ ಕರ್ನಾಟಕ' ಪಾಠದಲ್ಲಿ ಸಿದ್ದಗಂಗಾ ಮಠ ಹಾಗೂ ಆದಿಚುಂಚನಗಿರಿ ಮಠದ ಕುರಿತಾದ ಸೇವೆಯ ಸಾಲುಗಳು.

5) 7ನೇ ತರಗತಿಯ ಸಮಾಜ ವಿಜ್ಞಾನ ಭಾಗ–1 ರ ಮೈಸೂರು ಮತ್ತು ಇತರ ಸಂಸ್ಥಾನಗಳು ಎಂಬ ಪಾಠದಲ್ಲಿದ್ದ ಸುರಪುರ ನಾಯಕರ ಕುರಿತಾದ ವಿವರಗಳು.

6) 9ನೇ ತರಗತಿಯ ಸಮಾಜ ವಿಜ್ಞಾನ ಭಾಗ–1 ರ ಪಠ್ಯಪುಸ್ತಕದಲ್ಲಿ ಭಾರತದ ಮತ ಪರಿವರ್ತಕರು ಎಂಬ ಅಧ್ಯಾಯದಲ್ಲಿ ಬಸವಣ್ಣನವರ ಕುರಿತಾದ ವಿಷಯಾಂಶ.

7) 7ನೇ ತರಗತಿ ಸಮಾಜ ವಿಜ್ಞಾನ ಭಾಗ–2 ರ ಪಠ್ಯಪುಸ್ತಕದ 'ಕರ್ನಾಟಕ ರಾಜ್ಯ ಏಕೀಕರಣ ಹಾಗೂ ಗಡಿವಿವಾದಗಳು' ಎಂಬ ಪಾಠದಲ್ಲಿ ರಾಷ್ಟ್ರಕವಿ ಕುವೆಂಪು ರವರ ಹಾಗೂ ಹುಯಿಲಗೋಳ ನಾರಾಯಣರಾವ್ ರವರ ಭಾವಚಿತ್ರಗಳನ್ನು ಅಳವಡಿಸುವುದು.

8) 4ನೇ ತರಗತಿಯ ಪರಿಸರ ಅಧ್ಯಯನ "ಪ್ರತಿಯೊಬ್ಬರು ವಿಶಿಷ್ಟ" ಎಂಬ ಪಾಠದಲ್ಲಿ "ಸಾಹಿತ್ಯ ಕ್ಷೇತ್ರದಲ್ಲಿ ಹೆಸರು ಮಾಡಿದ ಕುವೆಂಪು ರವರಿಗೆ ಚಿಕ್ಕಂದಿನಿಂದಲು ಕಥೆ, ಕವನ, ಪುಸ್ತಕ ಓದುವ, ಬರೆಯುವ ಅಭ್ಯಾಸ ಇತ್ತು ಎಂಬ ವಾಕ್ಯದ ನಂತರ "ಅನೇಕರ ಪ್ರೋತ್ಸಾಹದಿಂದ ಇವರು ಮುಂದೆ ಪ್ರಖ್ಯಾತ ಕವಿ ಎನಿಸಿಕೊಂಡರು" ಎಂಬ ಸಾಲನ್ನು ಕೈಬಿಡುವುದು.

9) ಸಾಮಾನ್ಯವಾಗಿ ಪಠ್ಯಪುಸ್ತಕಗಳ ರಚನೆ, ಪರಿಷ್ಕರಣೆಗಳಾದಾಗ ಅಗತ್ಯವಾದ ತಿದ್ದುಪಡಿಗಳನ್ನು ತಿದ್ದೋಲೆ ರೂಪದಲ್ಲಿ ನೀಡುವುದು ಶಿಕ್ಷಣ ಇಲಾಖೆಯಲ್ಲಿ ಈ ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಪ್ರಕ್ರಿಯೆಯಾಗಿದೆ..

10) ಅಗತ್ಯವಿರುವ ತಿದ್ದೋಲೆ ಪ್ರತಿಗಳನ್ನು ಮುದ್ರಿಸಲು ಕರ್ನಾಟಕ ಪಠ್ಯಪುಸ್ತಕ ಸಂಘದಿಂದ ಈಗಾಗಲೇ ಪಠ್ಯಪುಸ್ತಕಗಳ ಮುದ್ರಣಕ್ಕೆ ಕಾರ್ಯಾದೇಶ ಪಡೆದಿರುವ ಎಲ್-1 ದರ ನಮೂದಿಸಿರುವ ಮುದ್ರಕರಿಂದ ಮುದ್ರಿಸಿ, ಕರ್ನಾಟಕ ಪಠ್ಯಪುಸ್ತಕ ಸಂಘದಲ್ಲಿ ಲಭ್ಯವಿರುವ ಅನುದಾನದಿಂದ ಭರಿಸಿ, ಎಲ್ಲಾ ಸರ್ಕಾರಿ, ಅನುದಾನಿತ ಶಾಲೆಗಳಿಗೆ ಹಾಗೂ ಅನುದಾನರಹಿತ ಶಾಲೆಗಳಿಗೆ ಉಚಿತವಾಗಿ ತಲಾ ಒಂದು ಪ್ರತಿಯಂತೆ ವಿತರಿಸುವುದು.

11) ತಿದ್ದೋಲೆಯ ವಿಷಯಾಂಶಗಳನ್ನು ಕರ್ನಾಟಕ ಪಠ್ಯಪುಸ್ತಕ ಸಂಘದ ಜಾಲತಾಣದಲ್ಲಿ ಪ್ರಕಟಿಸುವುದು ಮತ್ತು ಮೂಲ ಪುಸ್ತಕಗಳ ಸಾಫ್ಟ್ ಪ್ರತಿಯಲ್ಲಿ ಅಳವಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಹೆಚ್. ಎಸ್. 24/6/2022

(ಹೆಚ್.ಎಸ್. ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ ಶಿಕ್ಷಣ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಮಲ್ಲೇಶ್ವರಂ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು – 560085.
5. ಪರಿಶೀಲನಾ ಸಮಿತಿ ಅಧ್ಯಕ್ಷರು, ಸದಸ್ಯರುಗಳು ಹಾಗೂ ಕಾರ್ಯಕ್ರಮ ಸಂಯೋಜಕರು – (ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು – 560085 ರವರ ಮುಖಾಂತರ)
6. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು.
7. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.

ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:* 1 ರಿಂದ 10ನೇ ತರಗತಿಯ ಭಾಷಾ ವಿಷಯಗಳು, ಪರಿಸರ ಅಧ್ಯಯನ ಹಾಗೂ 6 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ ವಿಷಯಗಳ ಪರಿಷ್ಕೃತ ಪಠ್ಯಪುಸ್ತಕಗಳನ್ನು ಮಾರ್ಪಾಡಿಸಿ 2022-23ನೇ ಸಾಲಿಗೆ ಅಳವಡಿಸಿ, ಮುದ್ರಿಸಿ ವಿತರಿಸಲು ನೇಮಿಸಲಾಗಿದ್ದ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ವಿಸರ್ಜಿಸುವ ಬಗ್ಗೆ – ಆದೇಶ.

*ಓದಲಾಗಿದೆ:*

1. ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಪಿಎಂಸಿ 2021, ಬೆಂಗಳೂರು, ದಿನಾಂಕ: 08-09-2021.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 27-01-2022 ರಂದು ನಡೆದ ಸಭೆ ನಡವಳಿ
3. ಅಧ್ಯಕ್ಷರು, ಕರ್ನಾಟಕ ಪಠ್ಯ ಪುಸ್ತಕಗಳ ಪರಿಶೀಲನಾ ಸಮಿತಿ ರವರು ಸಲ್ಲಿಸಿರುವ ಸಮಗ್ರ ವರದಿ ದಿನಾಂಕ: 08-03-2022.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಪಿಎಂಸಿ 2021, ಬೆಂಗಳೂರು, ದಿನಾಂಕ:19-03-2022.
5. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ ರವರ ಟಿಪ್ಪಣಿ ಸಂಖ್ಯೆ: ಪ್ರಾ.ಪ್ರೌ.ಸ/ಆ.ಕಾ/2020(A)/2021-22, ದಿನಾಂಕ: 04-06-2022.

*****

*ಪ್ರಸ್ತಾವನೆ:*

6ನೇ ತರಗತಿಯ ಸಮಾಜ-ವಿಜ್ಞಾನ ಭಾಗ-1ರ ಪುಟ ಸಂಖ್ಯೆ 82ರ ಹೊಸಧರ್ಮಗಳು ಏಕೆ ಉದಯಿಸಿದವು ಎಂಬ ಶೀರ್ಷಿಕೆಯಡಿಯಲ್ಲಿ ಎರಡು ಪ್ಯಾರಾಗಳು ಮತ್ತು ಪುಟ ಸಂಖ್ಯೆ 83ರ ಪ್ರಾರಂಭಿಕ ಆರು ಸಾಲುಗಳನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಎಲ್ಲಾ 7 ಮಾಧ್ಯಮಗಳ ಪಠ್ಯ ಪುಸ್ತಕಗಳಿಂದ ಕೈಬಿಡಲು ಹಾಗೂ 1 ರಿಂದ 10ನೇ ತರಗತಿಯ ಭಾಷಾ ವಿಷಯಗಳು, ಪರಿಸರ ಅಧ್ಯಯನ ಹಾಗೂ 6 ರಿಂದ 10ನೇ ತರಗತಿಯ ಸಮಾಜ ವಿಜ್ಞಾನ ವಿಷಯಗಳಲ್ಲಿ ಇರಬಹುದಾದ ಸೂಕ್ಷ್ಮ/ಸಂಕೀರ್ಣ ವಿಷಯಗಳನ್ನು ಕುರಿತು

ಪರಿಶೀಲಿಸಿ ವರದಿ ನೀಡಲು ಶ್ರೀ ರೋಹಿತ್ ಚಕ್ರತೀರ್ಥ, ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಒಂದು ತಿಂಗಳೊಳಗೆ ವರದಿ ನೀಡುವಂತೆ ಆದೇಶಿಸಲಾಗಿತ್ತು.

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 27-01-2022 ರಂದು ನಡೆದ ಸಭೆ ನಡವಳಿಯಲ್ಲಿ ಸೂಚಿಸಿರುವಂತೆ, 1 ರಿಂದ 10ನೇ ತರಗತಿ ಕನ್ನಡ ಭಾಷೆ ಹಾಗೂ 6 ರಿಂದ 10ನೇ ತರಗತಿ ಸಮಾಜ ವಿಜ್ಞಾನ ವಿಷಯದ ಪಠ್ಯಪುಸ್ತಕಗಳನ್ನು ಸಮಿತಿ ಅಧ್ಯಕ್ಷರಾದ ಶ್ರೀ ರೋಹಿತ್ ಚಕ್ರತೀರ್ಥ ಹಾಗೂ ಪರಿಶೀಲನಾ ಸಮಿತಿ ಸದಸ್ಯರು ಇವರುಗಳು 1 ರಿಂದ 10ನೇ ತರಗತಿ ಭಾಷಾ ವಿಷಯಗಳು, 2 ಮತ್ತು 4 ನೇ ತರಗತಿಗಳ ಪರಿಸರ ಅಧ್ಯಯನ ಹಾಗೂ 6 ರಿಂದ 10ನೇ ತರಗತಿ ಸಮಾಜ ವಿಜ್ಞಾನ ಪಠ್ಯ ಪುಸ್ತಕಗಳನ್ನು ಪರಿಷ್ಕರಿಸಿದ್ದು, ಪರಿಷ್ಕರಿಸಿರುವ ಪಠ್ಯ ಪುಸ್ತಕಗಳನ್ನು 2022-23ನೇ ಸಾಲಿಗೆ ಅಳವಡಿಸಿಕೊಳ್ಳಲು ಹಾಗೂ ಮುದ್ರಿಸಿ ವಿತರಿಸಲು ಆದೇಶ ಹೊರಡಿಸುವಂತೆ ಕ್ರಮವಾಗಿ ಮೇಲೆ ಓದಲಾದ ಕ್ರಮಾಂಕ(2)ರ ಮೇರೆಗೆ ಮೇಲೆ ಓದಲಾದ ಕ್ರಮಾಂಕ(3)ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು ರವರು ಸಮುಚಿತ ಮಾರ್ಗದ ಮುಖಾಂತರ ವರದಿ ಸಲ್ಲಿಸಿರುತ್ತಾರೆ.

ಶ್ರೀ ರೋಹಿತ್ ಚಕ್ರತೀರ್ಥ, ಅಧ್ಯಕ್ಷರು ಹಾಗೂ ಸದಸ್ಯರುಗಳ ಸಮಿತಿಯು ಪರಿಷ್ಕರಿಸಿ ನೀಡಿರುವ 1 ರಿಂದ 10 ನೇ ತರಗತಿ ಕನ್ನಡ ಭಾಷಾ ವಿಷಯಗಳ ಪಠ್ಯ ಪುಸ್ತಕಗಳು, 6 ರಿಂದ 10ನೇ ತರಗತಿ ಸಮಾಜ ವಿಜ್ಞಾನ ಪಠ್ಯ ಪುಸ್ತಕಗಳು ಹಾಗೂ 2 ಮತ್ತು 4ನೇ ತರಗತಿಗಳ ಪರಿಸರ ಅಧ್ಯಯನದ ಪಠ್ಯ ಪುಸ್ತಕಗಳನ್ನು ಪರಿಷ್ಕೃತಗೊಳಿಸಿರುವುದಕ್ಕೆ ಘಟನೋತ್ತರ ಅನುಮತಿ ನೀಡಿ, 6 ರಿಂದ 8ನೇ ತರಗತಿಯ ಸಮಾಜ ವಿಜ್ಞಾನದ 7 ಮಾಧ್ಯಮದ 68 ಪರಿಷ್ಕೃತ ಪಠ್ಯಪುಸ್ತಕಗಳು ಹಾಗೂ 1 ರಿಂದ 10ನೇ ತರಗತಿಯ ಕನ್ನಡ ಭಾಷಾ ವಿಷಯದ 15 ಪರಿಷ್ಕೃತ ಪಠ್ಯಪುಸ್ತಕಗಳನ್ನು (ಒಟ್ಟು 83 ಪರಿಷ್ಕೃತ ಪಠ್ಯಪುಸ್ತಕಗಳು) 2022-23ನೇ ಶೈಕ್ಷಣಿಕ ಸಾಲಿಗೆ ಮುದ್ರಿಸಿ ವಿತರಿಸಲು ಮೇಲೆ ಓದಲಾದ ಕ್ರಮಾಂಕ(4)ರಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿತ್ತು:

- 6 ರಿಂದ 10ನೇ ತರಗತಿ ಸಮಾಜ ವಿಜ್ಞಾನ ವಿಷಯದ ಕನ್ನಡ ಹಾಗೂ ಆಂಗ್ಲ ಮಾಧ್ಯಮದ ಪರಿಷ್ಕೃತ ಪಠ್ಯಪುಸ್ತಕಗಳು.
- ಕನ್ನಡ ಹಾಗೂ ಆಂಗ್ಲ ಮಾಧ್ಯಮದಲ್ಲಿ ಪರಿಷ್ಕರಿಸಿರುವ ಪಠ್ಯಪುಸ್ತಕಗಳನ್ನು ಇತರೆ 5 ಮಾಧ್ಯಮಗಳಲ್ಲಿ (ಉರ್ದು, ತಮಿಳು, ತೆಲುಗು, ಮರಾಠಿ ಹಾಗೂ ಹಿಂದಿ) ಅನುವಾದಿಸಿ 2022-23ನೇ ಸಾಲಿನಿಂದಲೇ ಅನುವಾದ ಕಾರ್ಯ ಮುಗಿದ ನಂತರ ಮುದ್ರಿಸಿ, ವಿತರಿಸುವುದು.
- ಪರಿಷ್ಕರಿಸಿರುವ 1 ರಿಂದ 10ನೇ ತರಗತಿ ಕನ್ನಡ ಭಾಷಾ ಪಠ್ಯಪುಸ್ತಕಗಳು.
- ಪರಿಷ್ಕರಿಸಿರುವ 2 ಮತ್ತು 4ನೇ ತರಗತಿಗಳ ಪರಿಸರ ಅಧ್ಯಯನ ಪಠ್ಯಪುಸ್ತಕಗಳು.

- ಪರಿಷ್ಕೃತ ಕಾರ್ಯಕ್ಕೆ ಭರಿಸಿರುವ/ಭರಿಸುವ ವೆಚ್ಚವನ್ನು ಕರ್ನಾಟಕ ಪಠ್ಯಪುಸ್ತಕ ಸಂಘದಲ್ಲಿ ಲಭ್ಯವಿರುವ ಅನುದಾನದಲ್ಲಿ ಬಳಸುವುದು.
- ಕನ್ನಡ ಭಾಷೆ, ಪರಿಸರ ಅಧ್ಯಯನ ಮತ್ತು ಸಮಾಜ ವಿಜ್ಞಾನ ವಿಷಯದ ಪರಿಷ್ಕೃತ ಪಠ್ಯಪುಸ್ತಕಗಳಲ್ಲಿರುವ ಎಲ್ಲಾ ವಿಷಯಾಂಶಗಳು, ಲೇಖಕರು/ಕವಿಗಳು, ಚಿತ್ರಗಳು, ಭೂಪಟಗಳು, ನಕ್ಷೆಗಳು ಹಾಗೂ ಆಧಾರಗಳಿಗೆ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು ಜವಾಬ್ದಾರರಾಗಿದ್ದು, ಪಠ್ಯಪುಸ್ತಕಗಳಲ್ಲಿರುವ ವಿಷಯಗಳಿಗೆ ಮುಂದಿನ ದಿನಗಳಲ್ಲಿ ಆಕ್ಷೇಪಣೆ ಬಂದಲ್ಲಿ ಶ್ರೀ ರೋಹಿತ್ ಚಕ್ರತೀರ್ಥ, ಸಮಿತಿಯ ಅಧ್ಯಕ್ಷರು ಉತ್ತರಿಸುವ ಜವಾಬ್ದಾರಿ ಹೊಂದಿರುತ್ತಾರೆ.
- ಪರಿಷ್ಕೃತ ಕನ್ನಡ ಭಾಷೆ ಹಾಗೂ ಸಮಾಜ ವಿಜ್ಞಾನ ಪಠ್ಯಪುಸ್ತಕಗಳಲ್ಲಿ ಸಮಿತಿ ಅಧ್ಯಕ್ಷರು ಅನುಮೋದಿಸಿ ನೀಡಿರುವ ಪರಿಷ್ಕರಣೆ ಸಮಿತಿ ಸದಸ್ಯರ ಪಟ್ಟಿಯನ್ನು ಪಠ್ಯಪುಸ್ತಕಗಳಲ್ಲಿ ಅಳವಡಿಸುವುದು.
- ಸಮಿತಿ ಅಧ್ಯಕ್ಷರಾದ ಶ್ರೀ ರೋಹಿತ್ ಚಕ್ರತೀರ್ಥ ರವರು ಪುನರ್ ಪರಿಷ್ಕರಣೆ ಕುರಿತು ನೀಡಿರುವ ಅಂಶವನ್ನು (ಅಧ್ಯಕ್ಷರ ನುಡಿ) ಪರಿಷ್ಕೃತ ಪಠ್ಯಪುಸ್ತಕಗಳಲ್ಲಿ ಅಳವಡಿಸುವುದು.

"ಪ್ರಸ್ತುತ ಪಠ್ಯಪುಸ್ತಕ ಪರಿಷ್ಕರಣಾ ಸಮಿತಿಯ ಕಾರ್ಯ ಮುಗಿದಿರುವುದರಿಂದ ಸದರಿ ಪಠ್ಯಪುಸ್ತಕ ಪರಿಷ್ಕರಣಾ ಸಮಿತಿಯನ್ನು ವಿಸರ್ಜಿಸಲು" ಸನ್ಮಾನ್ಯ ಮುಖ್ಯಮಂತ್ರಿಯವರು ಪಠ್ಯಪುಸ್ತಕಗಳ ಪರಿಷ್ಕರಣೆಗೆ ಸಂಬಂಧಿಸಿದಂತೆ ದಿನಾಂಕ: 03-06-2022ರಂದು ನೀಡಿದ ಪತ್ರಿಕಾ ಪ್ರಕಟಣೆಯಲ್ಲಿ ತೀರ್ಮಾನಿಸಲಾಗಿರುತ್ತದೆ. ಅದರಂತೆ, ತಕ್ಷಣದಿಂದ ಜಾರಿಗೆ ಬರುವಂತೆ ಪಠ್ಯಪುಸ್ತಕ ಪರಿಷ್ಕರಣಾ ಸಮಿತಿಯನ್ನು ವಿಸರ್ಜಿಸುವ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಕ್ರಮಾಂಕ(5)ರಲ್ಲಿ ನಿರ್ದೇಶಿಸಲಾಗಿರುತ್ತದೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ : ಇಡಿ 52 ಪಿಎಂಸಿ 2021 (ಭಾಗ-1), ಬೆಂಗಳೂರು, ದಿನಾಂಕ:07-06-2022.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ರೋಹಿತ್ ಚಕ್ರತೀರ್ಥ, ಅಧ್ಯಕ್ಷರು ಹಾಗೂ ಸದಸ್ಯರುಗಳ ಸಮಿತಿಯು 1 ರಿಂದ 10 ನೇ ತರಗತಿ ಕನ್ನಡ ಭಾಷಾ ವಿಷಯಗಳ ಪಠ್ಯ ಪುಸ್ತಕಗಳು, 6 ರಿಂದ 10ನೇ ತರಗತಿ ಸಮಾಜ ವಿಜ್ಞಾನ ಪಠ್ಯ ಪುಸ್ತಕಗಳು ಹಾಗೂ 2 ಮತ್ತು 4ನೇ ತರಗತಿಗಳ ಪರಿಸರ ಅಧ್ಯಯನದ ಪಠ್ಯ ಪುಸ್ತಕಗಳನ್ನು ಪರಿಷ್ಕೃತಗೊಳಿಸಿರುವುದಕ್ಕೆ ಘಟನೋತ್ತರ ಅನುಮತಿ ನೀಡಿ, 6 ರಿಂದ 8ನೇ ತರಗತಿಯ ಸಮಾಜ ವಿಜ್ಞಾನದ 7 ಮಾಧ್ಯಮದ 68 ಪರಿಷ್ಕೃತ ಪಠ್ಯಪುಸ್ತಕಗಳು ಹಾಗೂ 1 ರಿಂದ 10ನೇ ತರಗತಿಯ ಕನ್ನಡ ಭಾಷಾ ವಿಷಯದ 15 ಪರಿಷ್ಕೃತ ಪಠ್ಯಪುಸ್ತಕಗಳನ್ನು (ಒಟ್ಟು 83 ಪರಿಷ್ಕೃತ ಪಠ್ಯಪುಸ್ತಕಗಳು)

2022–23ನೇ ಶೈಕ್ಷಣಿಕ ಸಾಲಿಗೆ ಮುದ್ರಿಸಿ ವಿತರಿಸಲು ನೇಮಿಸಲಾಗಿದ್ದ ಸಮಿತಿಯ ಕಾರ್ಯವು ಮುಕ್ತಾಯವಾಗಿರುವುದರಿಂದ ಸದರಿ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ವಿಸರ್ಜಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

7/6/2022

(ಹೆಚ್.ಎಸ್. ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ ಶಿಕ್ಷಣ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು – 560085.
4. ಪರಿಶೀಲನಾ ಸಮಿತಿ ಅಧ್ಯಕ್ಷರು, ಸದಸ್ಯರುಗಳು ಹಾಗೂ ಕಾರ್ಯಕ್ರಮ ಸಂಯೋಜಕರು – (ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಹೊಸಕೆರೆಹಳ್ಳಿ, ಬೆಂಗಳೂರು – 560085 ರವರ ಮುಖಾಂತರ)
5. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು.
6. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
8. ಎಲ್ಲಾ ಜಿಲ್ಲಾ ಉಪನಿರ್ದೇಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
9. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
11. ಮಾಹಿತಿ ಕೇಂದ್ರ ಮಾಹಿತಿ ಜಾಲ ತಾಣದಲ್ಲಿ ಪ್ರಕಟಿಸಲು.

ಪ್ರತಿ:

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಅಪರ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಸೇವೆಗಳು 1 & 2) ಹಾಗೂ ಎಲ್ಲಾ ಅಧೀನ ಕಾರ್ಯದರ್ಶಿಗಳು.